# Akashvani : Bangalore
# Regional Bulletin In Kannada
# 20.05.2024 / 14.30 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

**೧. ರಾಜ್ಯ ಸರ್ಕಾರಕ್ಕೆ ಇಂದು ಒಂದು ವರ್ಷದ ಸಂಭ್ರಮ - ಗ್ಯಾರಂಟಿ ಯೋಜನೆ ಸಮರ್ಥಿಸಿಕೊಂಡ ಮುಖ್ಯಮಂತ್ರಿ ಸಿದ್ದರಾಮಯ್ಯ**

**೨. ಒಂದು ವರ್ಷದಲ್ಲಿ ಸರ್ಕಾರ ಸಾಧನೆ ಶೂನ್ಯ- ಪ್ರತಿಪಕ್ಷ ಬಿಜೆಪಿ, ಜೆಡಿಎಸ್ ಆರೋಪ**

**೩. ರಾಜ್ಯದ ಹಲವೆಡೆ ವರ್ಷಧಾರೆ; ಚುರುಕುಗೊಂಡ ಕೃಷಿ ಚಟುವಟಿಕೆ**

**೪. ದೇಶದ ಹಲವೆಡೆ ಐದನೇ ಹಂತದ ಮತದಾನ ಪ್ರಗತಿಯಲ್ಲಿ; ಮಧ್ಯಾಹ್ನದ ವೇಳೆಗೆ ಶೇಕಡ ೩೬ ರಷ್ಟು ಮತದಾನ**

**<><*<><>*><>**

ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ಇಂದು ಒಂದು ವರ್ಷದ ಸಂಭ್ರಮ. ಬೆಂಗಳೂರಿನ ಪ್ರೆಸ್ ಕ್ಲಬ್ ನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯದ ಜನತೆಗೆ ನಾವು ಕೊಟ್ಟಿದ್ದ ವಚನವನ್ನ ಈಡೇರಿಸಿದ್ದೇವೆ. ಆದ್ರೆ ಅನ್ನಭಾಗ್ಯ ಯೋಜನೆ ಜಾರಿಗೆ ಕೇಂದ್ರ ಸರ್ಕಾರ ಸಹಕಾರ ನೀಡಲಿಲ್ಲ ಎಂದು ಹೇಳಿದರು. ಯಾವುದೇ ಕಾರಣಕ್ಕೂ ಗ್ಯಾರಂಟಿ ಯೋಜನೆ ನಿಲ್ಲಿಸಲ್ಲ ಎಂದು ಸ್ಪಷ್ಟಪಡಿಸಿದರು. ಅಧಿಕಾರಕ್ಕೆ ಬಂದ ೯ ತಿಂಗಳೊಳಗೆ ಎಲ್ಲಾ ಗ್ಯಾರಂಟಿ ಜಾರಿಗೊಳಿಸಿದ್ದೇವೆ ಎಂದು ಹೇಳಿದರು. ಮಧ್ಯವರ್ತಿಗಳ ಹಾವಳಿ ಇಲ್ಲದೆ ೧ ಕೋಟಿ ೨೦ ಲಕ್ಷ ಮನೆ ಯಜಮಾನಿಯರಿಗೆ ನೇರವಾಗಿ ಖಾತೆಗಳಿಗೆ ಹಣ ಹಾಕಲಾಗುತ್ತಿದೆ ಎಂದರು. ಗೃಹ ಜ್ಯೋತಿ ಅಡಿಯಲ್ಲಿ ೧ ಕೋಟಿ ೬೦ ಲಕ್ಷ ಜನರಿಗೆ ಫ್ರೀ ವಿದ್ಯುತ್ ಕೊಡುತ್ತಿದ್ದೇವೆ. ಜೂ.೧೧ ರಂದು ಶಕ್ತಿ ಯೋಜನೆ ಜಾರಿ ಮಾಡಲಾಗಿದ್ದು, ಏಪ್ರಿಲ್ ಕೊನೆಯ ವೇಳೆಗೆ ೨೧ ಕೋಟಿ ೩೩ ಲಕ್ಷಕ್ಕೂ ಅಧಿಕ ಮಹಿಳೆಯರು ಪ್ರಯಾಣ ಮಾಡಿದ್ದಾರೆ. ಇದಕ್ಕಾಗಿ ೪ ಸಾವಿರದ ೮೫೭ ಕೋಟಿ ರೂಪಾಯಿ ಖರ್ಚು ಮಾಡಿದ್ದೇವೆ. ಅನ್ನಭಾಗ್ಯ ಯೋಜನೆಯಲ್ಲಿ ೪ ಕೋಟಿ ೧೦ ಲಕ್ಷ ಫಲಾನುಭವಿಗಳಿಗೆ ೫ ಸಾವಿರದ ೭೫೪ ಕೋಟಿ ಹಣ ವರ್ಗಾವಣೆ ಮಾಡಿದ್ದೇವೆ ಎಂದು ತಿಳಿಸಿದರು. ಒಟ್ಟು ೫ ಗ್ಯಾರಂಟಿ ಯೋಜನೆಗೆ ೩೬ ಸಾವಿರ ಕೋಟಿ ಖರ್ಚು ಮಾಡಲಾಗಿದೆ ಎಂದು ಹೇಳಿದರು.

ಲೋಕಸಭಾ ಚುನಾವಣೆ ನೀತಿ ಸಂಹಿತೆ ಇರೋದ್ರಿಂದ ಸಂಭ್ರಮಾಚಾರಣೆ ಮಾಡದಿರಲು ಸರ್ಕಾರ ನಿರ್ಧರಿಸಿದೆ.

**<><*<><>*><>**

ನಮ್ಮ ಸರ್ಕಾರವನ್ನು ಒಂದು ವರ್ಷಗಳ ಕಾಲ ಯಶಸ್ವಿಯಾಗಿ ಮುನ್ನಡೆಸಿದ ರಾಜ್ಯದ ಏಳು ಕೋಟಿ ಕನ್ನಡಿಗರಿಗೆ ತುಂಬು ಹೃದಯದ ಧನ್ಯವಾದಗಳು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದಾರೆ. ಕಾಂಗ್ರೆಸ್ ಪಕ್ಷದ ಮೇಲೆ ವಿಶ್ವಾಸ ಇಟ್ಟು ಅಭದ್ರತೆಯ ಆತಂಕ ಇರಲೇಬಾರದೆಂದು ಸ್ಪಷ್ಟವಾದ ಬಹುಮತವನ್ನು ಕೊಟ್ಟು ಸರ್ಕಾರ ರಚನೆಗೆ ಅವಕಾಶ ಕೊಟ್ಟಿದ್ದು ರಾಜ್ಯದ ಮತದಾರರ ಪ್ರಜ್ಞಾವಂತಿಕೆ ಎಂದು ತಿಳಿಸಿದ್ದಾರೆ.

**<><*<><>*><>**

ಒಂದು ವರ್ಷದಲ್ಲಿ ರಾಜ್ಯ ಸರ್ಕಾರದ ಸಾಧನೆ ಶೂನ್ಯ ಎಂದು ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಹಾಗೂ ಪ್ರತಿಪಕ್ಷ ನಾಯಕ ಆರ್ ಅಶೋಕ್ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ವಿಜಯೇಂದ್ರ, ಕಳೆದ ಒಂದು ವರ್ಷದಲ್ಲಿ ರಾಜ್ಯದಲ್ಲಿ ಒಂದೇ ಒಂದು ಅಭಿವೃದ್ಧಿ ಕಾರ್ಯಕ್ಕೆ ಚಾಲನೆ ನೀಡಿಲ್ಲ. ಗುದ್ದಲಿ ಪೂಜೆಯ ಉದಾಹರಣೆಯೂ ಇಲ್ಲ ಎಂದು ಆರೋಪಿಸಿದರು. ನುಡಿದಂತೆ ನಡೆಯುವ ಸರ್ಕಾರ ಎಂದು ಕಾಂಗ್ರೆಸ್ಸಿಗರು ತಮ್ಮ ಬೆನ್ನನ್ನು ತಾವು ತಟ್ಟಿಕೊಳ್ಳುತ್ತಿದ್ದಾರೆ ಎಂದು ಅವರು ವ್ಯಂಗ್ಯವಾಡಿದರು. ಗ್ಯಾರಂಟಿಯೇ ಅಭಿವೃದ್ಧಿ ಎಂದು ಬಿಂಬಿಸಲಾಗುತ್ತಿದೆ. ಬರಗಾಲದ ವಿಚಾರದಲ್ಲಿ ಸರ್ಕಾರದ ನಡವಳಿಕೆ ಸರಿಯಿಲ್ಲ ಎಂದು ದೂರಿದರು. ರಾಜ್ಯದಲ್ಲಿ ೬೯೨ಕ್ಕೂ ಹೆಚ್ಚು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ರಾಜ್ಯ ಸರ್ಕಾರ, ಕೃಷಿ ಸಾಲ, ಬೆಳೆ ನಷ್ಟಕ್ಕೆ ಪರಿಹಾರ ಕೊಡುವ ನಿಟ್ಟಿನಲ್ಲಿ ಜವಾಬ್ದಾರಿಯುತವಾಗಿ ನಡೆದುಕೊಳ್ಳದೆ ಇರುವುದು ದುರದೃಷ್ಟಕರ ಎಂದು ಅವರು ಬೇಸರ ವ್ಯಕ್ತಪಡಿಸಿದರು.

**<><*<><>*><>**

ಗ್ಯಾರಂಟಿಗಳನ್ನು ಬಿಟ್ಟರೆ ಕಾಂಗ್ರೆಸ್ ಸರ್ಕಾರದ ಸಾಧನೆ ಏನು ಎಂದು ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಪ್ರಶ್ನಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಪ್ರತಿನಿತ್ಯ ಜಾಹೀರಾತು ಕೊಟ್ಟಿದ್ದೇ ಇವರ ದೊಡ್ಡ ಸಾಧನೆ ಎಂದು ಹೇಳಿದರು. ಕಳೆದ ಒಂದು ವರ್ಷದಿಂದ ಸರ್ಕಾರ ಐಸಿಯುನಲ್ಲಿತ್ತು ಎಂದು ವ್ಯಂಗ್ಯವಾಡಿದರು. ರೈತರಿಗೆ ಈ ಸರ್ಕಾರ ಧೈರ್ಯ ತುಂಬಿದ್ದು ಕಾಣಿಸಲೇ ಇಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

**<><*<><>*><>**

ಜೂನ್ ೦೩ ರಂದು ಬೆಂಗಳೂರು ಪದವೀಧರರ ಕ್ಷೇತ್ರದಿಂದ ರಾಜ್ಯ ವಿಧಾನ ಪರಿಷತ್ತಿಗೆ ನಡೆಯುವ ಚುನಾವಣೆಗೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಅಗತ್ಯ ಸಿದ್ದತೆಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ ತಿಳಿಸಿದ್ದಾರೆ. ಮತದಾನ ಸಂಬಂಧ ಜಿಲ್ಲೆಯ  ವ್ಯಾಪ್ತಿಯಲ್ಲಿ  ೨೫ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ ಎಂದು ಹೇಳಿದ್ದಾರೆ.

<><*<><>*><>

ರಾಜ್ಯದ ಹಲವೆಡೆ ಗುಡುಗು ಸಹಿತ ಭಾರೀ ಮಳೆಯಾಗುತ್ತಿದೆ. ವರುಣನ ಕೃಪೆಯಿಂದಾಗಿ ರೈತರು ಸಂತಸಗೊಂಡಿದ್ದು, ಕೃಷಿ ಚಟುವಟಿಕೆಗಳು ಬಿರುಸುಗೊಂಡಿವೆ. ಬಿಸಿಲಿನ ತಾಪದಿಂದ ಕೋಲಾರ ಜಿಲ್ಲೆಯ ಮಾಲೂರು ತಾಲೂಕಿನ ಜನತೆಗೆ ನಿನ್ನೆ ಸಂಜೆ ಒಂದೂವರೆ ತಾಸಿಗೂ ಹೆಚ್ಚು ಕಾಲ ಸುರಿದ ಧಾರಾಕಾರ ಮಳೆಯು ಭೂಮಿಗೆ ತಂಪೆರೆದಿದೆ. ಮಳೆಯ ನೀರು ಚರಂಡಿಗಳಲ್ಲಿ ತುಂಬಿ ರಸ್ತೆಗಳ ಮೇಲೆ ಹರಿದು ಮುಖ್ಯ ರಸ್ತೆಯಲ್ಲಿ ವಾಹನ ಸಂಚಾರಕ್ಕೆ ತೊಂದರೆಯಾಗಿತ್ತು. ರಸ್ತೆ ಚರಂಡಿಗಳಲ್ಲಿ ನೀರು ತುಂಬಿ ಹರಿಯುತ್ತಿದೆ. ಚರಂಡಿಗಳು ಶಿಥಿಲಗೊಂಡಿವೆ. ಮಡಿವಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚೊಕ್ಕಹಂಡಹಳ್ಳಿ ಗ್ರಾಮದ ಮನೆಗಳ ಮುಂದೆ ಮಳೆನೀರು ಹರಿಯಲು ಚರಂಡಿ ವ್ಯವಸ್ಥೆ ಇಲ್ಲದೇ ಮನೆಗಳ ಮುಂದೆ ನೀರು ನಿಂತು ಓಡಾಡಲು ಅನಾನುಕೂಲವಾಗಿರುವ ಪರಿಸ್ಥಿತಿ ನಿರ್ಮಾಣ ವಾಗಿದೆ. ಕೆಜಿಎಫ್ ತಾಲೂಕಿನಾದ್ಯಂತ ಉತ್ತಮ ಮಳೆಯಾಗಿರುವುದರಿಂದ ಪೂರ್ವ ಮುಂಗಾರು ಬಿತ್ತನೆ ಕಾರ್ಯದಲ್ಲಿ ರೈತರು ಸಕ್ರಿಯರಾಗಿದ್ದಾರೆ.

ಸುಡು ಬಿಸಿಲಿನಿಂದ ತತ್ತರಿಸಿದ್ದ ವಿಜಯನಗರ ಜಿಲ್ಲೆಯಾದ್ಯಂತ ನಿನ್ನೆ ಧಾರಾಕಾರ ಮಳೆಯಾಗಿದ್ದು, ಕೃಷಿ ಚಟುವಟಿಕೆಗಳು ಆರಂಭಗೊಂಡಿವೆ. ಹೊಸಪೇಟೆ ತಾಲೂಕಿನ ಗಾದಿಗನೂರು ಗ್ರಾಮದ ರೈತರ ಹೊಲದಲ್ಲಿ ಎರಡು ಎತ್ತುಗಳು ಸಿಡಿಲು ಬಡಿದು ಮೃತಪಟ್ಟಿವೆ ಎಂದು ವರದಿಯಾಗಿದೆ.

<><*<><>*><>

ಕಳೆದೊಂದು ವಾರದಿಂದ ರಾಜ್ಯದ ಬಹುತೇಕ ಕಡೆ ವರುಣನ ಅಬ್ಬರ ಜೋರಾಗಿದೆ.  ಈ ನಡುವೆ ಮುಂದಿನ ನಾಲ್ಕೈದು ದಿನ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ವಾಯುಭಾರ ಕುಸಿತ ಉಂಟಾಗಿರುವ ಪರಿಣಾಮ ಇಂದಿನಿಂದ ಐದು ದಿನ ರಾಜ್ಯದ ೧೭ ಜಿಲ್ಲೆಗಳಿಗೆ ಹೈ ಅಲರ್ಟ್ ಘೋಷಣೆ ಮಾಡಲಾಗಿದೆ. ಕೊಡಗು, ಚಿಕ್ಕಮಗಳೂರು, ಶಿವಮೊಗ್ಗ ಹಾಗೂ ಕರಾವಳಿ ಭಾಗದ ಜಿಲ್ಲೆಗಳಲ್ಲಿ ಭಾರೀ ಮಳೆಯಾಗಲಿದೆ. ಬೆಂಗಳೂರು, ಬೆಂಗಳೂರು ಗ್ರಾಮಾಂತರ, ಚಾಮರಾಜನಗರ, ಕೋಲಾರ, ಚಿಕ್ಕಬಳ್ಳಾಪುರ, ಕೊಡಗು, ಮೈಸೂರು, ಹಾಸನ, ತುಮಕೂರು, ಚಿತ್ರದುರ್ಗ, ಮಂಡ್ಯ, ರಾಮನಗರ, ಉತ್ತರಕನ್ನಡ, ದಕ್ಷಿಣ ಕನ್ನಡ, ಉಡುಪಿ, ಜಿಲ್ಲೆಗಳಲ್ಲಿ ಗುಡುಗು, ಮಿಂಚು ಸಹಿತ ಮಳೆಯಾಗುವ ಸಾಧ್ಯತೆ. ಜೊತೆಗೆ ಉತ್ತರ ಕರ್ನಾಟಕ ಹಲವು ಜಿಲ್ಲೆಗಳಲ್ಲಿ ಮಳೆಯಾಗುವ ಮುನ್ಸೂಚನೆ ನೀಡಲಾಗಿದೆ.

<><*<><>*><>

ಆರು ರಾಜ್ಯಗಳು ಮತ್ತು ಎರಡು ಕೇಂದ್ರಾಡಳಿತ ಪ್ರದೇಶಗಳಲ್ಲಿ ಹರಡಿರುವ ೪೯ ಲೋಕಸಭಾ ಕ್ಷೇತ್ರಗಳಿಗೆ ಇಂದು ಐದನೇ ಹಂತದ ಮತದಾನ ಪ್ರಗತಿಯಲ್ಲಿದೆ. ಉತ್ತರ ಪ್ರದೇಶದ ೧೪, ಮಹಾರಾಷ್ಟ್ರದ ೧೩, ಪಶ್ಚಿಮ ಬಂಗಾಳದ ೭, ಒಡಿಶಾ ಮತ್ತು ಬಿಹಾರದ ತಲಾ ೫, ಜಾರ್ಖಂಡ್ ನ ೩, ಜಮ್ಮು ಮತ್ತು ಕಾಶ್ಮೀರ ಮತ್ತು ಲಡಾಖ್ ನ ತಲಾ ೧ ಸ್ಥಾನಗಳಿಗೆ ಇಂದು ಮತದಾನ ನಡೆಯುತ್ತಿದೆ. ಒಡಿಶಾದ ಕಂಧಮಾಲ್, ಸುಂದರ್ಗಢ್, ಬರ್ಗರ್, ಬಲಂಗೀರ್ ಮತ್ತು ಅಸ್ಕಾ ಲೋಕಸಭಾ ಕ್ಷೇತ್ರಗಳಿಗೆ ಇಂದು ಮತದಾನ ನಡೆಯುತ್ತಿದೆ. ಏತನ್ಮಧ್ಯೆ, ಇಂದು ಎರಡನೇ ಹಂತದಲ್ಲಿ ೩೫ ವಿಧಾನಸಭಾ ಕ್ಷೇತ್ರಗಳಿಗೆ ಮತದಾನ ನಡೆಯುತ್ತಿದೆ. ಐದು ಲೋಕಸಭಾ ಸ್ಥಾನಗಳಿಗೆ ಒಟ್ಟು ೪೦ ಅಭ್ಯರ್ಥಿಗಳು ಮತ್ತು ೩೫ ವಿಧಾನಸಭಾ ಸ್ಥಾನಗಳಿಗೆ ೨೬೫ ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಬಿಹಾರದ ಹಾಜಿಪುರ, ಮುಜಾಫರ್ಪುರ, ಸರನ್, ಮಧುಬನಿ ಮತ್ತು ಸೀತಾಮರ್ಹಿ ಲೋಕಸಭಾ ಕ್ಷೇತ್ರಗಳಿಗೆ ಐದನೇ ಹಂತದ ಮತದಾನ ನಡೆಯುತ್ತಿದೆ. ಮಧ್ಯಾಹ್ನ ೧ ಗಂಟೆಯವರೆಗೆ ಶೇಕಡ ೩೬.೭೩ ರಷ್ಟು ಮತದಾನವಾಗಿದೆ. ರಾಜ್ಯಗಳಲ್ಲಿನ ಮತದಾನದ ಶೇಕಡಾವಾರು ಪ್ರಮಾಣವು ಈ ಕೆಳಗಿನಂತಿದೆ. ಬಿಹಾರದಲ್ಲಿ ಶೇಕಡ ೩೪ ರಷ್ಟು, ಜಮ್ಮು ಮತ್ತು ಕಾಶ್ಮೀರ ೩೪, ಜಾರ್ಖಂಡ್ ೪೧, ಲಡಾಖ್ ೫೨, ಮಹಾರಾಷ್ಟ್ರ ೨೭, ಒಡಿಶಾ ೩೫, ಉತ್ತರಪ್ರದೇಶ ೩೯ ಹಾಗೂ ಪಶ್ಚಿಮ ಬಂಗಾಳದಲ್ಲಿ ಶೇಕಡ ೪೮ ರಷ್ಟು ಮತದಾನವಾಗಿರುವ ವರದಿಯಾಗಿದೆ.

<><*<><>*><>

ಬೆಂಗಳೂರು ರಾಜಕಾಲುವೆ ಯಲಹಂಕ ವಲಯ ವ್ಯಾಪ್ತಿಯ ರಮಣಶ್ರೀ ಗಾರ್ಡೇನಿಯಾ ಲೇಔಟ್ ಹಾಗೂ ನಾರ್ತ್ ಹುಡ್ ನಲ್ಲಿ ಇತ್ತೀಚೆಗೆ ಸುರಿದ ಮಳೆಯಿಂದ ರಾಜಕಾಲುವೆಯಲ್ಲಿ ನೀರಿನ ಹರಿವು ಹೆಚ್ಚಾಗಿ ಸುಮಾರು ೨೦ ಮನೆಗಳಿಗೆ ಮಳೆ ನೀರು ನುಗ್ಗಿದೆ. ಈ ಹಿನ್ನಲೆಯಲ್ಲಿ ಇಂದು ಸ್ಥಳಕ್ಕೆ ಭೇಟಿ ನೀಡಿದ ಬಿಬಿಎಂಪಿ ಮುಖ್ಯ ಆಯುಕ್ತರಾದ ತುಷಾರ್ ಗಿರಿನಾಥ್  ಅರಣ್ಯ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಯಾದ ಎನ್. ಮಂಜುನಾಥ್ ಪ್ರಸಾದ್ ಜೊತೆ ಸ್ಥಳ ಪರಿಶೀಲನೆ ನಡೆಸಿದರು. ತುಷಾರ್ ಗಿರಿನಾಥ್ ಮಾತನಾಡಿ, ನಗರದ ರಮಣಶ್ರೀ ಗಾರ್ಡೇನಿಯಾ ಲೇಔಟ್ ಹಾಗೂ ನಾರ್ತ್ ಹುಡ್ ವಿಲ್ಲಾ ಪ್ರದೇಶದಲ್ಲಿ ಮಳೆ ನೀರು ನಿಲ್ಲದಂತೆ ಶೀಘ್ರ ಪರ್ಯಾಯವಾಗಿ ೫೨೦ ಮೀಟರ್ ಉದ್ದದ ೧.೬೦೦ ಎಂ.ಎಂ ಪೈಪ್ ಅಳವಡಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಹೇಳಿದರು.

<><*<><>*><>

ಬಾಲ್ಯ ವಿವಾಹ ಸಮಾಜದ ಪಿಡುಗಾಗಿದ್ದು, ಇದನ್ನು ತಡೆಗಟ್ಟಲು ಹೆಚ್ಚು ಜಾಗೃತಿ ಕಾರ್ಯಕ್ರಮವನ್ನು ಮಂಡ್ಯ ಜಿಲ್ಲೆಯಲ್ಲಿ ಆಯೋಜಿಸುವಂತೆ ಜಿಲ್ಲಾಧಿಕಾರಿ ಡಾ.ಕುಮಾರ ಜಿಲ್ಲಾ ಮಕ್ಕಳ ರಕ್ಷಣಾ ಸಮಿತಿ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಮಂಡ್ಯ ಜಿಲ್ಲೆಯಲ್ಲಿ ೨೦೨೩-೨೪ನೇ ಸಾಲಿನಲ್ಲಿ ೧೮೦ ಪ್ರಕರಣಗಳು ವರದಿಯಾಗಿದ್ದು, ೧೦೫ ಬಾಲ್ಯ ವಿವಾಹವನ್ನು ತಡೆಯಲಾಗಿದೆ. ೭೫ ಬಾಲ್ಯ ವಿವಾಹ ಪ್ರಕರಣಗಳ ಮೇಲೆ ಎಫ್ಐಆರ್ ದಾಖಲಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

<><*<><>*><>

ಇಂಡಿಯನ್ ಪ್ರಿಮಿಯರ್ ಲೀಗ್ ೧೭ನೇ ಆವೃತ್ತಿಯ ಪ್ಲೆಆಫ್ ಪಂದ್ಯಗಳು ನಾಳೆಯಿಂದ ನಡೆಯಲಿವೆ. ಅಹಮದಾಬಾದ್ ನಲ್ಲಿ ನಡೆಯಲಿರುವ ಮೊದಲ ಕ್ವಾಲಿಫೈಯರ್ ಪಂದ್ಯದಲ್ಲಿ ಕೊಲ್ಕೊತ್ತಾ ನೈಟ್ ರೈಡರ್ಸ್ ಮತ್ತು ಸನ್‌ರೈಸರ್ಸ್ ಹೈದರಾಬಾದ್ ತಂಡಗಳು ಮುಖಾಮುಖಿಯಾಗಲಿವೆ. ಬುಧವಾರ ನಡೆಯಲಿರುವ ಎಲಿಮಿನೇಟರ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ರಾಜಸ್ಥಾನ ರಾಯಲ್ಸ್ ತಂಡಗಳು ಹಣಾಹಣಿ ನಡೆಸಲಿವೆ. ಇದೇ ೨೪ರಂದು ಎರಡನೇ ಕ್ವಾಲಿಫೈಯರ್ ಪಂದ್ಯ ಹಾಗೂ ಇದೇ ೨೬ರಂದು ಫೈನಲ್ ಪಂದ್ಯ ಚೆನ್ನೈನಲ್ಲಿ ನಡೆಯಲಿದೆ.